# All India Radio: Bangalore
# Regional Bulletin In Kannada
# 08.11.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

***************

<u>**ಮುಖ್ಯಾಂಶಗಳು**</u>

1. **ಕಬ್ಬಿಗೆ ಪ್ರತಿ ಟನ್‌ಗೆ 3 ಸಾವಿರದ 300 ರೂಪಾಯಿ ; ಅಧಿಕೃತ ಆದೇಶ ಹೊರಡಿಸಿದ ಸರ್ಕಾರ**
2. **ಕಬ್ಬಿಗೆ ಸಲಹಾ ಬೆಲೆ ಘೋಷಿಸುವಂತೆ ರಾಜ್ಯ ಸರ್ಕಾರಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಲಹೆ**
3. **ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ನಾಳೆ ರಾಜ್ಯ ಪ್ರವಾಸ ಶ್ರವಣಬೆಳಗೊಳ, ಮೇಲುಕೋಟೆಗೆ ಭೇಟಿ**
4. **ಮತಗಳ್ಳತನದ ವಿರುದ್ಧ ಕಾಂಗ್ರೆಸ್‌ನಿಂದ 1 ಕೋಟಿ 12 ಲಕ್ಷ 40 ಸಾವಿರ ಸಹಿ ಸಂಗ್ರಹ**
5. **ಮೈಸೂರಿನಲ್ಲಿ ಡಾ.ಗಂಗೂಬಾಯಿ ಹಾನಗಲ್ ಸಂಗೀತ ವಿಶ್ವವಿದ್ಯಾಲಯದ 10ನೇ ಘಟಿಕೋತ್ಸವ ; ರಾಜ್ಯಪಾಲರಿಂದ ಗೌರವ ಪದವಿ ಪ್ರದಾನ**

***************

ಕಬ್ಬಿಗೆ ಪ್ರತಿ ಕ್ವಿಂಟಾಲ್‌ಗೆ 3 ಸಾವಿರದ 300 ರೂಪಾಯಿ ನಿಗದಿಪಡಿಸಿ ರಾಜ್ಯ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ.

ನಿನ್ನೆ ಕಾರ್ಖಾನೆ ಮಾಲೀಕರು ರೈತರ ಜೊತೆ ಸಭೆ ನಡೆಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಣಯ ತೆಗೆದುಕೊಂಡಿದ್ದರು. ಈ ಆದೇಶದಂತೆ 50 ರೂಪಾಯಿ ಮಾಲೀಕರು ಮತ್ತು 50 ರೂಪಾಯಿ ಸರ್ಕಾರ ನೀಡಲಿದೆ.

ಕಾರ್ಖಾನೆಗಳು ಮೊದಲ ಕಂತಿನ ಮೊತ್ತವನ್ನು ಸಕ್ಕರೆ ನಿಯಂತ್ರಣಾ ಕಾಯ್ದೆಯಡಿಯಲ್ಲಿ ನಿಗದಿಪಡಿಸುವಂತೆ 14 ದಿನಗಳಲ್ಲಿ ಹಣವನ್ನು ರೈತರಿಗೆ ಸಂದಾಯ ಮಾಡಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

***************

ಕಬ್ಬು ಬೆಳೆಗಾರರ ಸಮಸ್ಯೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡುತ್ತಿರುವುದು ಸರಿಯಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಪ್ರಲ್ಹಾದ್ ಜೋಶಿ, ಕೇಂದ್ರ ಸರ್ಕಾರ ರೈತರ ಕಲ್ಯಾಣಕ್ಕೆ ಬದ್ಧವಾಗಿದೆ. ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆಗಳ ಹಿತಾಸಕ್ತಿ ಕಾಪಾಡಲು ಹಿಂದೆಂದಿಗಿಂತಲೂ ಉತ್ತಮ ಕ್ರಮಗಳನ್ನು ಜಾರಿಗೆ ತಂದಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಉತ್ತರಪ್ರದೇಶ, ಪಂಜಾಬ್, ಹರಿಯಾಣದಂತೆ ರಾಜ್ಯ ಸರ್ಕಾರವು ಸಲಹಾ ಬೆಲೆ ಘೋಷಿಸುವಂತೆ ಸರ್ಕಾರಕ್ಕೆ ಸಲಹೆ ನೀಡಿದ್ದಾರೆ.

***************

ಕಬ್ಬು ಬೆಳೆಗಾರರ ಹೋರಾಟದ ಕಿಚ್ಚು ತಾತ್ಕಾಲಿಕವಾಗಿ ಮಾತ್ರ ಶಮನವಾಗಿದೆ. ಸರ್ಕಾರದ ನಿರ್ಲಕ್ಷದಿಂದ ಇಂತಹ ಸಮಸ್ಯೆ ನಿರ್ಮಾಣವಾಗಿದೆ ಎಂದು ಮಾಜಿ ಮುಖ್ಯಮಂತ್ರಿ, ಸಂಸದ ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ವಂದೇ ಮಾತರಂ, ಜನಗಣಮನ ಎರಡೂ ರಾಷ್ಟ್ರ ಗೀತೆಗಳು. ಅವುಗಳಿಗೆ ಅಪಮಾನ ಮಾಡಬಾರದು ಎಂದು ತಿಳಿಸಿದ್ದಾರೆ.

**ಧ್ವನಿ : ಜಗದೀಶ್ ಶೆಟ್ಟರ್ (30 ಸೆಕೆಂಡ್‌ಗಳು)**

***************

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ನಾಳೆ ಇದೇ ಮೊದಲ ಬಾರಿಗೆ ರಾಜ್ಯ ಪ್ರವಾಸ ಕೈಗೊಳ್ಳಲಿದ್ದಾರೆ. ಶ್ರವಣಬೆಳಗೊಳ, ಮಂಡ್ಯದ ಮೇಲುಕೋಟೆ ಹಾಗೂ ಮೈಸೂರಿನ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

ಶ್ರವಣಬೆಳಗೊಳದಲ್ಲಿ ಆಚಾರ್ಯ ಶಾಂತಿ ಸಾಗರ್ ಮಹಾರಾಜರ ವಿಗ್ರಹ ಪ್ರತಿಷ್ಠಾಪನಾ ಸಮಾರಂಭ ಮತ್ತು ನಾಲ್ಕನೇ ಬೆಟ್ಟದ ನಾಮಕರಣ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಮೈಸೂರಿನಲ್ಲಿ ಚಾಮುಂಡಿಬೆಟ್ಟ ಹಾಗೂ ಸುತ್ತೂರು ಮಠಕ್ಕೂ ಭೇಟಿ ನೀಡಲಿದ್ದಾರೆ.

***************

ರಾಜ್ಯ ಹಾಗೂ ದೇಶದಲ್ಲಿ ನಡೆದಿರುವ ಮತಗಳ್ಳತನ ವಿರುದ್ಧ ಎಐಸಿಸಿ ನಾಯಕರು ಹಮ್ಮಿಕೊಂಡಿರುವ ಸಹಿ ಸಂಗ್ರಹ ಅಭಿಯಾನದಲ್ಲಿ ರಾಜ್ಯದಿಂದ 1 ಕೋಟಿ 12 ಲಕ್ಷ 40 ಸಾವಿರ ಸಹಿಗಳನ್ನು ಸಂಗ್ರಹಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಹಿ ಸಂಗ್ರಹದ ಅರ್ಜಿಗಳನ್ನು ಇದೇ ತಿಂಗಳ 10 ರಂದು ದೆಹಲಿಗೆ ರವಾನಿಸಲು ತೀರ್ಮಾನಿಸಲಾಗಿದೆ ಎಂದು ಹೇಳಿದ್ದಾರೆ.

ಪಾಲಿಕೆ ಚುನಾವಣೆಗಳನ್ನು ಮತಪತ್ರಗಳ ಮೂಲಕ ನಡೆಸಲು ಚಿಂತನೆ ನಡೆಸಲಾಗಿದೆ. ಆಳಂದ ಕ್ಷೇತ್ರದ ಅಕ್ರಮದ ಕುರಿತಂತೆ ತನಿಖೆಗೆ ಎಸ್‌ಐಟಿ ರಚಿಸಿದ್ದು, ಶೀಘ್ರವೇ ತನಿಖಾ ವರದಿ ದೊರೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಮತ ಅಕ್ರಮದಲ್ಲಿ ಚುನಾವಣಾ ಆಯೋಗವೇ ಭಾಗಿಯಾಗಿದೆ ಎಂದು ದೂರಿದ್ದಾರೆ.

***************

ಬಿಹಾರದಲ್ಲಿ ಸೋಲುವ ಭೀತಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತಗಳ್ಳತನ ಆರೋಪ ಕುರಿತಂತೆ ಸುದ್ದಿಗೋಷ್ಠಿ ನಡೆಸಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿ ಅವರ ಒತ್ತಾಯದ ಮೇರೆಗೆ ಉಭಯ ನಾಯಕರು ಸುಳ್ಳು ಆರೋಪ ಮಾಡಿದ್ದಾರೆ.

ರಾಹುಲ್ ಗಾಂಧಿಯವರ ಎಲ್ಲಾ ಆರೋಪಗಳು ಕಟ್ಟು ಕಥೆಗಳು ಎಂದು ವ್ಯಂಗ್ಯವಾಡಿದ್ದಾರೆ.

***************

ಸಂಗೀತವು ಮನಸ್ಸಿನ ಸಂಘರ್ಷಗಳನ್ನು ಶಾಂತಗೊಳಿಸುವ, ಹಾಗೂ ಮಾನವೀಯತೆಯನ್ನು ಏಕತೆಯಲ್ಲಿ ಬಂಧಿಸುವ ಶಕ್ತಿಯನ್ನು ಹೊಂದಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನಲ್ಲಿ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ 10ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಭಾರತೀಯ ಸಂಸ್ಕೃತಿಯಲ್ಲಿ ಸಂಗೀತ ಮತ್ತು ಕಲೆಗೆ ಬಹಳ ಉನ್ನತ ಸ್ಥಾನವಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ರಾಜ್ಯಪಾಲರು, ಪ್ರೊಫೆಸರ್ ಬಿ.ಆರ್. ಶೇಷಾದ್ರಿ ಅಯ್ಯಂಗಾರ್, ಜನಾರ್ಧನ, ಜಿ.ಎಂ. ಶಿವಪ್ರಸಾದ್ ಅವರಿಗೆ ಗೌರವ ಪದವಿಗಳನ್ನು ಪ್ರದಾನ ಮಾಡಿದರು.

***************

ರಾಜ್ಯದ ವಿವಿಧೆಡೆ ಇಂದು ದಾಸಶ್ರೇಷ್ಠ ಕನಕದಾಸರ ಜಯಂತಿ ಕಾರ್ಯಕ್ರಮವನ್ನು ಆಚರಿಸಲಾಯಿತು.

ಕನಕದಾಸರು ಕೇವಲ ದಾಸ ಸಾಹಿತ್ಯದ ಪಿತಾಮಹರಲ್ಲ, ಅವರು ಸಮಾಜ ಸುಧಾರಕ, ತಾತ್ವಿಕ ಚಿಂತಕ ಹಾಗೂ ಮಾನವೀಯತೆಯ ಪ್ರತೀಕರಾಗಿದ್ದರು ಎಂದು **ಧಾರವಾಡ ಜಿಲ್ಲಾಡಳಿತ** ಆಯೋಜಿಸಿದ್ದ ಕನಕದಾಸರ ಜಯಂತಿಯಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ತಿಳಿಸಿದ್ದಾರೆ.

ಕನಕದಾಸರು ತಮ್ಮ ಕೀರ್ತನೆಗಳ ಮೂಲಕ ಸಮಾಜಕ್ಕೆ ಉತ್ತಮ ಸಂದೇಶ ನೀಡಿ, ಸಾಮಾಜಿಕ ಬದಲಾವಣೆಗೆ ಶ್ರಮಿಸಿದ ಮಹನೀಯರಾಗಿದ್ದಾರೆ ಎಂದು **ಬೆಂಗಳೂರು ಗ್ರಾಮಾಂತರ** ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಹೇಳಿದ್ದಾರೆ.

ಜಾತಿ ಅಸಮಾನತೆಯ ವಿರುದ್ಧ ಹೋರಾಡಿದ ದಾಸಶ್ರೇಷ್ಠ ಕನಕದಾಸರು ತಮ್ಮ ಕೀರ್ತನೆಗಳ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸಿ ಅಂಕು–ಡೊಂಕು, ಮೇಲುಕೀಳುಗಳನ್ನು ಹೋಗಲಾಡಿಸಲು ಶ್ರಮಿಸಿದರು ಎಂದು **ಚಿಕ್ಕಬಳ್ಳಾಪುರ ಜಿಲ್ಲಾ** ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಅಭಿಪ್ರಾಯಪಟ್ಟಿದ್ದಾರೆ.

ಕನಕದಾಸರನ್ನು ಕೇವಲ ಒಂದು ಜಾತಿಗೆ ಸೀಮಿತಗೊಳಿಸದೆ ಅವರನ್ನು ಮನುಕುಲದ ಉದ್ಧಾರಕರೆಂದು ಭಾವಿಸಬೇಕು ಎಂದು **ಕೋಲಾರ ಜಿಲ್ಲಾ ಉಸ್ತುವಾರಿ** ಸಚಿವ ಬಿ.ಎಸ್‌ಸುರೇಶ್ ಅಭಿಪ್ರಾಯಪಟ್ಟಿದ್ದಾರೆ.

ಕನಕದಾಸರು ಸಮಾಜ ಕಂಡ ಅತ್ಯಂತ ಶ್ರೇಷ್ಠ ದಾರ್ಶನಿಕ ಸಂತ ಎಂದು ಗ್ಯಾರಂಟಿ ಅನುಷ್ಠಾನ ಸಮಿತಿ ರಾಜ್ಯ ಅಧ್ಯಕ್ಷ ಹೆಚ್.ಎಂ. ರೇವಣ್ಣ **ರಾಮನಗರ** ಮಾಗಡಿಯಲ್ಲಿ ನಡೆದ ಕನಕದಾಸ ಜಯಂತಿ ಕಾರ್ಯಕ್ರಮದಲ್ಲಿ ಬಣ್ಣಿಸಿದರು.

ಕನಕದಾಸರು ತಮ್ಮ ಕಿರ್ತನೆಗಳ ಮೂಲಕ ಸಮಾಜದ ಡೊಂಕುಗಳನ್ನು ತಿದ್ದಿದವರು ಎಂದು **ಮಂಡ್ಯ** ಶಾಸಕ ಪಿ.ರವಿಕುಮಾರ್ ತಿಳಿಸಿದ್ದಾರೆ.

ಮಡಿಕೇರಿಯಲ್ಲಿ ನಡೆದ ಕನಕದಾಸರ ಜಯಂತಿ ಕಾರ್ಯಕ್ರಮಕ್ಕೆ **ಕೊಡಗು ಜಿಲ್ಲಾ** ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಆನಂದ್ ಪ್ರಕಾಶ್ ಮೀನಾ ಚಾಲನೆ ನೀಡಿದರು.

***************

ಮಂಡ್ಯ–ಕಾರ್ಮಿಕ ಇಲಾಖೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ, ಜಿಲ್ಲಾಡಳಿತ ಸಹಯೋಗದಲ್ಲಿ ಮಂಡ್ಯ ಜಿಲ್ಲೆಯ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರಿಗೆ ಸ್ಮಾರ್ಟ್ ಕಾರ್ಡ್ ವಿತರಣೆ ಹಾಗೂ ಅರಿವು ಕಾರ್ಯಕ್ರಮವನ್ನು ಇದೇ 11 ರಂದು ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಸವಿತಾ ತಿಳಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಾರ್ಯಕ್ರಮದ ಉಪಸ್ಥಿತಿ ವಹಿಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಕಾರ್ಮಿಕ ಸಚಿವ ಸಚಿವ ಸಂತೋಷ್ ಎಸ್.ಲಾಡ್ ಸ್ಮಾರ್ಟ್ ಕಾರ್ಡ್ ಹಾಗೂ ವಿವಿಧ ಸೌಲಭ್ಯಗಳನ್ನು ವಿತರಿಸಲಿದ್ದಾರೆ ಎಂದು ತಿಳಿಸಿದ್ದಾರೆ.

***************

ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 150ನೇ ಜನ್ಮ ವಾರ್ಷಿಕೋತ್ಸವದ ಅಂಗವಾಗಿ ನಗರದಲ್ಲಿ ಇದೇ 11ರಂದು ಏಕತಾ ಅಭಿಯಾನ ನಡಿಗೆ ಹಮ್ಮಿಕೊಳ್ಳಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ತಿಳಿಸಿದ್ದಾರೆ.

***************

ಬೆಂಗಳೂರು ಪೂರ್ವ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಉದ್ದಿಮೆ ಪರವಾನಗಿ ನೀಡುವ ವಿಶೇಷ ಅಭಿಯಾನ ಆಯೋಜಿಸಲಾಗಿದೆ. ಇದರ ಸದುಪಯೋಗವನ್ನು ಎಲ್ಲ ವಾಣಿಜ್ಯ ಚಟುವಟಿಕೆದಾರರು ಪಡೆದುಕೊಳ್ಳುವಂತೆ ಪೂರ್ವ ನಗರ ಪಾಲಿಕೆ ಅಪರ ಆಯುಕ್ತರಾದ ಸ್ನೇಹಲ್ ಸುಧಾಕರ್ ಮನವಿ ಮಾಡಿದ್ದಾರೆ.

*******ಮುಕ್ತಾಯ********